**ಕರ್ನಾಟಕ ಸರ್ಕಾರ**
**ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ**
**ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.**

**ಸಂಖ್ಯೆ : ವಾಇ : ಜಂ ನಿ : ಸುಮಪ : 2021–22** **ದಿನಾಂಕ : 05–08–2021**

# ಪತ್ರಿಕಾ ಪ್ರಕಟಣೆ

## PRESS RELEASE

### ಸಚಿವರ ಪ್ರವಾಸ

ಬೆಂಗಳೂರು, ಆಗಸ್ಟ್ 05 ( ಕರ್ನಾಟಕ ವಾರ್ತೆ ) :

ಹಾಸನ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ.ಗೋಪಾಲಯ್ಯ ಅವರು ಆಗಸ್ಟ್ 06 ರಂದು ಹಾಸನ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು ಅಂದೇ ಕೇಂದ್ರ ಸ್ಥಾನಕ್ಕೆ ಆಗಮಿಸುವರು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

### District Judges Recruitment

Bengaluru, August 05 (Karnataka Information):

In pursuance of this office Notification of even number dated 21-09-2020 inviting online applications for filling up of 30 vacant posts of District Judges by direct recruitment in accordance with the Karnataka Judicial service (Recruitment) Rules, 2004 and Amendment Rules 2011, 2015 and 2016 the list of candidates selected for the post of District Judges by direct recruitment, is published on the High Court of Karnataka Website: http://karnatakajudiciary.kar.nic.in/recruitment.php. said press.

### ಸಚಿವರ ಪ್ರವಾಸ

ಬೆಂಗಳೂರು, ಆಗಸ್ಟ್ 05 ( ಕರ್ನಾಟಕ ವಾರ್ತೆ ) :

ದಾವಣಗೆರೆ ಜಿಲ್ಲಾ ಉಸ್ತುವಾರಿ ಸಚಿವರಾದ ಬಿ.ಎ.ಬಸವರಾಜ (ಬೈರತಿ), ಅವರು ಆಗಸ್ಟ್ 06 ರಂದು ದಾವಣಗೆರೆ ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದಾರೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

### 8ನೇ ತರಗತಿಗಾಗಿ ಪ್ರವೇಶ ಬಯಸುವ ಕರ್ನಾಟಕ ರಾಜ್ಯದ ಬಾಲಕರಿಗೆ ಅರ್ಹತಾ ಪ್ರವೇಶ ಪರೀಕ್ಷೆ

ಬೆಂಗಳೂರು, ಆಗಸ್ಟ್ 05 ( ಕರ್ನಾಟಕ ವಾರ್ತೆ ) :

ಜುಲೈ 2022ನೇ ಅಧಿವೇಶನಕ್ಕಾಗಿ ಉತ್ತರಾಖಂಡ ರಾಜ್ಯದ ಡೆಹರಾಡೂನಲ್ಲಿರುವ ರಾಷ್ಟ್ರೀಯ ಇಂಡಿಯನ್ ಮಿಲಿಟರಿ ಕಾಲೇಜಿಗೆ 8ನೇ ತರಗತಿಗಾಗಿ ಪ್ರವೇಶ ಬಯಸುವ ಕರ್ನಾಟಕ ರಾಜ್ಯದ ಬಾಲಕರಿಗೆ ಅರ್ಹತಾ ಪ್ರವೇಶ ಪರೀಕ್ಷೆಯನ್ನು ಬೆಂಗಳೂರು ಕೇಂದ್ರದಲ್ಲಿ ಡಿಸೆಂಬರ್ 18, 2021 ರಂದು ನಡೆಸಲಾಗುವುದು.

ಅಭ್ಯರ್ಥಿಗಳು ಯಾವುದೇ ಸರ್ಕಾರದಿಂದ ಮಾನ್ಯತೆ ಪಡೆದಿರುವ ಶಾಲೆಯಲ್ಲಿ 7ನೇ ತರಗತಿಯಲ್ಲಿ ಓದುತ್ತಿರುವ ಅಥವಾ ಉತ್ತೀರ್ಣರಾಗಿರುವ ಹಾಗೂ ದಿನಾಂಕ: 02–07–2022 ರಂತೆ 11 1/2 ವರ್ಷದಿಂದ 13 ವರ್ಷದೊಳಗಿರುವ ಬಾಲಕರು ಮಾತ್ರ ಪ್ರವೇಶ ಪರೀಕ್ಷೆಗೆ ಅರ್ಹರಿರುತ್ತಾರೆ.

ಈ ಸಂಸ್ಥೆಯ ಮುಖ್ಯ ಗುರಿ ಯುವಕರನ್ನು ದೇಶದ ಸಶಸ್ತ್ರ ಪಡೆಗೆ ಸೇರಲು ಸಿದ್ಧಗೊಳಿಸುವುದು ಹಾಗೂ ಈ ನಿಟ್ಟಿನಲ್ಲಿ ಯುವಕರಿಗೆ ಸರ್ವ ರೀತಿಯ ವಿದ್ಯಾಭ್ಯಾಸ / ತರಬೇತಿ ನೀಡುವುದು. ಕಾಲೇಜಿನಲ್ಲಿ ವರ್ಷವೊಂದಕ್ಕೆ ಪ್ರಸಕ್ತ ವಿದ್ಯಾಭ್ಯಾಸ ಶುಲ್ಕ (ಸಾಮಾನ್ಯ ವರ್ಗ) ರೂ.107500/– ಹಾಗೂ (ಎಸ್‌ಸಿ/ಎಸ್‌ಟಿ) ರೂ. 93900/– ಆಗಿರುತ್ತದೆ. ಈ ಶುಲ್ಕವು ಕಾಲಕಾಲಕ್ಕೆ ಹೆಚ್ಚಾಗಬಹುದು. ವಿದ್ಯಾರ್ಥಿಯು ಪ್ರವೇಶ ನೀಡುವಾಗ ರೂ. 30,000/– ಭದ್ರತಾ ಠೇವಣಿ ನೀಡಬೇಕಾಗುತ್ತದೆ. ಈ ಮೊತ್ತವನ್ನು ವಿದ್ಯಾರ್ಥಿಯು ಪದವೀಧರನಾದ ಬಳಿಕ ಹಿಂತಿರುಗಿಸಲಾಗುವುದು.

ಅರ್ಜಿ ನಮೂನೆಗಳನ್ನು ಹಾಗೂ ಹಳೆಯ ಪ್ರಶ್ನೆ ಪತ್ರಿಕೆಗಳ ಕಿರುಪುಸ್ತಕವನ್ನು, ರಾಷ್ಟ್ರೀಯ ಭಾರತೀಯ ಮಿಲಿಟರಿ ಕಾಲೇಜು, ಗರಹಿ ಕ್ಯಾಂಟ್, ಡೆಹ್ರಾಡೂನ್, ಉತ್ತರಾಖಂಡ್, ಪಿನ್ ನಂ: 248003 ಮೂಲಕ ಪಡೆಯಬಹುದು.

ಸಾಮಾನ್ಯ ಅಭ್ಯರ್ಥಿಗಳಿಗೆ ರೂ.600/– ಎಸ್‌ಸಿ/ಎಸ್‌ಟಿ ಅಭ್ಯರ್ಥಿಗಳಿಗೆ ರೂ.555/– ಆನ್‌ಲೈನ್ ಪಾವತಿ ಮಾಡುವ ಮೂಲಕ ಪ್ರಾಸ್ಪೆಕ್ಟಸ್ ಕಮ್ ಅಜಿ ನಮೂನೆ ಮತ್ತು ಹಳೆಯ ಪ್ರಶ್ನೆ ಪತ್ರಿಕೆಗಳ ಕಿರುಪುಸ್ತಕಗಳನ್ನು ಸಹ ಪಡೆಯಬಹುದು. ವೆಬ್‌ಸೈಟ್ ವಿಳಾಸ www.rimc.gov.in ಗೆ ಲಾಗ್‌ಇನ್ ಆಗಿ ಶುಲ್ಕ ಪಾವತಿಸಿದ ನಂತರ ಪ್ರಾಸ್ಪೆಕ್ಟಸ್ ಕಮ್ ಅರ್ಜಿ ನಮೂನೆ ಮತ್ತು ಹಳೆಯ ಪ್ರಶ್ನೆ ಪತ್ರಿಕೆಗಳ ಕಿರುಪುಸ್ತಕಗಳನ್ನು ಸ್ಪೀಡ್ ಪೋಸ್ಟ್ ಮೂಲಕ ರವಾನಿಸಲಾಗುತ್ತದೆ.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 080–25589459 ಅಥವಾ ಸಮೀಪದಲ್ಲಿರುವ ಜಿಲ್ಲಾ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಕಾರ್ಯಾಲಯವನ್ನು ಸಂಪರ್ಕಿಸಬಹುದು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## RIMC ADMISSION TEST IN DECEMBER 2021

**5TH August 2021, Bengaluru (Karnataka Information)**

Applications are invited from BOYS of Karnataka for admission to class 8th in Rashtriya Indian Military College (RIMC), Dehradun (Uttarakhand) for Jul 2022 Term. The Entrance Examination for the same will be conducted in Bangalore on 18 Dec 2021 (Saturday). Candidates appearing for the above test should not be less than 11 ½ years in age but should not have attained the age of 13 years as on 01 July 2022 i.e. they should have been born not earlier than 02 July 2009 and not later than 01 Jan 2011. The boy should either be studying in Class 7 th or passed Class 7 th from any recognized school at the time of admission to the RIMC, i.e. on 01 July 2022. The primary aim of this institution is to prepare the boys for entry into Defense Services and to provide quality all round education to young boys. The annual fee is presently Rs.1,07,500/- for Gen candidates and Rs. 93,000/- for SC/ST candidates per year. It may increase from time to time. At the time of entry a Security Deposit of Rs. 30,000/- is to be made (incl in annual fee). This is refunded when the Cadet graduates from the college.

The prospectus-cum-application form and booklet of old question papers can be obtained from the Rashtriya Indian Military College, Garhi Cantt, Dehradun, Uttarkhand, Pin-248003.

The prospectus-cum-application form and booklet of old question papers can also be obtained by making online payment of Rs. 600/- for General Candidates and Rs. 555/- for SC/ST Candidates on RIMC website www.rimc.gov.in. On receipt of the payment the prospectus-cum application form and booklet of old question papers will be dispatched by Speed Post only.

The prospectus-cum-application form and booklet of old question papers can be obtained by sending a written request with a Demand Draft of Rs.600/- for Gen Candidates and Rs. 555/- for SC/ST candidates along with Caste certificate in favoring "THE COMMANDANT RIMC DEHRADUN' PAYBLE AT SBI, TEL BHAVAN, DEHRADUN (BANK CODE NO. 01576), UTTARAKHAND. The address should be typed/written clearly in capital letters with pin code and contact number on the envelope. RIMC will not be responsible for any postal delay or loss transit of prospectus caused by illegal of

incomplete address. The delay on part of postal department is not the responsibility of RIMC Dehradun Institution.

Prescribed application forms duly completed, in duplicate, should reach Director, Department of Sainik Welfare and Resettlement, Field Marshal KM Cariappa Bhavan, 58, Field Marshal KM Cariappa Road, Bangalore-560025 along with the following documents on or before 05/10/2021.

Five passport size photographs (including one each affixed on the application form). Attested copy of Birth Certificate issued by Municipal Corporation/Gram Panchayat (in English version only). Attested copy of SC/ST certificate for SC/ST candidates ( in English version only). Admit card envelope duly addressed and affixed with Rs. 40/- for sending the Admission Ticket by Speed/Registered Post. Certificate from the Principal of the school in original with photograph on it attested stating date of birth and in which class studying. Domicile Certificate from Tehsildar. Photo copy of Adhar card (both side) is mandatory

.

For further details contact 080-25589459 or your nearest District Sainik Welfare And Resettlement offices says press note release.

## ಬೆಂಗಳೂರು ಜಲಮಂಡಳಿಯಿಂದ ಫೋನ್-ಇನ್ ಕಾರ್ಯಕ್ರಮ

ಬೆಂಗಳೂರು, ಆಗಸ್ಟ್ 05 ( ಕರ್ನಾಟಕ ವಾರ್ತೆ ) :

ಬೆಂಗಳೂರು ಜಲಮಂಡಳಿಯ ವತಿಯಿಂದ ಆಗಸ್ಟ್ 07, 2021 ರ ಶನಿವಾರದಂದು ಬೆಳಗ್ಗೆ 09:00 ರಿಂದ 10:30 ರವರೆಗೆ ಎನ್.ಜಯರಾಮ್, ಭಾ.ಆ.ಸೇ., ಅಧ್ಯಕ್ಷರು, ಬೆಂಗಳೂರು ಜಲಮಂಡಳಿ ಇವರೊಂದಿಗೆ ನೇರ ಫೋನ್-ಇನ್ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ನೀರಿನ ಸಂಪರ್ಕ ಹೊಂದಿರುವ ಗ್ರಾಹಕರು ತಮ್ಮ ಆರ್.ಆರ್.ಸಂಖ್ಯೆಯನ್ನು ತಿಳಿಸಿ ದೂರನ್ನು ನೀಡಬೇಕು. ನಂತರ ಸಾರ್ವಜನಿಕರು ತಮ್ಮ ವಲಯ/ಪ್ರದೇಶಗಳಲ್ಲಿನ ಕುಡಿಯುವ ನೀರಿನ ಸಮಸ್ಯೆ ಮತ್ತು ಒಳಚರಂಡಿ ಕೊಳವೆ/ಇಳ ಗುಂಡಿಯಿಂದ ತ್ಯಾಜ್ಯ ನೀರು ಹೊರಬರುತ್ತಿರುವ ಬಗ್ಗೆ ಜಲಮಾಪನ ಹಾಗೂ ನೀರಿನ ಬಿಲ್ಲಿನ ಸಮಸ್ಯೆಯ ಬಗ್ಗೆ ನೇರವಾಗಿ ಫೋನ್-ಇನ್ ಕಾರ್ಯಕ್ರಮದಲ್ಲಿ ಭಾಗವಹಿಸಿ, ತಮ್ಮ ಕುಂದು-ಕೊರತೆಗಳನ್ನು ಬಗೆಹರಿಸಿಕೊಳ್ಳಬಹುದು.

ಹೆಚ್ಚಿನ ಮಾಹಿತಿಗಾಗಿ ಸಾರ್ವಜನಿಕರು ದೂರವಾಣಿ ಸಂಖ್ಯೆ 080 -22945119 ನ್ನು ಸಂಪರ್ಕಿಸಬಹುದಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## BWSSB: Phone-in program

Bengaluru, August 05 (Karnataka Information):

BWSSB is conducting a Phone-in program with Sri N.Jayaram, I.A.S., Hon'ble Chairman, BWSSB on 07-08-2021 i.e., on saturday from 09:00 am to 10:30 am. So we are here by requesting the public to discuss and redressal the grievances concerned with the Water Billing, Manhole Overflowing, Meter Reading issues, Improper Water Supply and Sanitary issues. Public can contact through the phone number:**080-22945119**.

- **It is requested to Consumers to give the R.R.Number details before raising complaint**.

## ಬೆಂಗಳೂರು ನಗರದಲ್ಲಿ ಸ್ಥಾಪಿಸಿರುವ ವಾಯು ಗುಣಮಟ್ಟ ಮಾಪನ ಕೇಂದ್ರಗಳ ವಾಯು ಗುಣಮಟ್ಟ ಸೂಚ್ಯಂಕ

ಬೆಂಗಳೂರು, ಆಗಸ್ಟ್ 05 ( ಕರ್ನಾಟಕ ವಾರ್ತೆ ) :

**ವಾಯುಗುಣಮಟ್ಟ ಸೂಚ್ಯಂಕ (AQI), ಬೆಂಗಳೂರು**

**ದಿನಾಂಕ: 5.8.2021(Average of past 24 hours)**

| ಕ್ರಮ ಸಂಖ್ಯೆ | ಮಾಪನ ಕೇಂದ್ರಗಳ ಹೆಸರು | ವಾಯುಗುಣಮಟ್ಟ ಸೂಚ್ಯಂಕ (AQI) | ವರ್ಗ | ಪ್ರಮುಖ ಮಾಲಿನ್ಯಕಾರಕ |
|---|---|---|---|---|
| 1 | ಪಶುವೈದ್ಯಕೀಯಕಾಲೇಜು, ಹೆಬ್ಬಾಳ | 34 | ಉತ್ತಮ | $PM_{10}$ |
| 2 | ಜಯನಗರ 5ನೇ ಬ್ಲಾಕ್, ಶಾಲಿನಿ ಮೈದಾನ | 36 | ಉತ್ತಮ | $NO_2$ |
| 3 | ಕವಿಕ, ಮೈಸೂರುರಸ್ತೆ | 78 | ತೃಪ್ತಿಕರ | $PM_{2.5}$ |
| 4 | ರಾಜೀವ್‌ಗಾಂಧಿಎದೆರೋಗಗಳ ಸಂಸ್ಥೆ, ನಿಮ್ಹಾನ್ಸ್ ಹೊಂಬೆಗೌಡನಗರ | 48 | ಉತ್ತಮ | $PM_{10}$ |
| 5 | ಹೆಚ್.ಎಸ್.ಆರ್ ಲೇಔಟ್, ಕೇಂದ್ರರೇಷ್ಮೆ ಮಂಡಳಿ ಹತ್ತಿರ | 99 | ತೃಪ್ತಿಕರ | $PM_{10}$ |
| 6 | ನಗರರೈಲ್ವೆ ನಿಲ್ದಾಣ, ಮೆಜೆಸ್ಟಿಕ್, ಬೆಂಗಳೂರು | 54 | ತೃಪ್ತಿಕರ | $PM_{10}$ |
| 7 | ಸಾಣೆಗುರುವನಹಳ್ಳಿ, ನಿಸರ್ಗ ಭವನ, ಕರ್ನಾಟಕರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಶಿವನಗರ | 49 | ಉತ್ತಮ | $PM_{10}$ |
| **(5.8.2021 at 11.05 AM)** | | | | |
| 8 | BWSSB,ಕಾಡಬೀಸನಹಳ್ಳಿ | 117 | ಸಾಧಾರಣ | CO |
| 9 | ಪೀಣ್ಯ | * | * | * |
| 10 | ಬಿಟಿಎಂ ಲೇಔಟ್ | 53 | ತೃಪ್ತಿಕರ | CO |

| ವರ್ಗ(ಶ್ರೇಣಿ) | ಉಂಟಾಗಬಹುದಾದಆರೋಗ್ಯ ಪರಿಣಾಮಗಳು |
|---|---|
| **ಉತ್ತಮ (0–50)** | ಕನಿಷ್ಠ ಪರಿಣಾಮ |
| **ತೃಪ್ತಿಕರ (51–100)** | ಸೂಕ್ಷ್ಮಜನರಿಗೆ ಸಣ್ಣ ಉಸಿರಾಟದ ಅಸ್ವಸ್ಥತೆ |
| **ಸಾಧಾರಣ (101–200)** | ಶ್ವಾಸಕೋಶ, ಹೃದಯ ಕಾಯಿಲೆಯವರು, ಮಕ್ಕಳು ಮತ್ತು ಹಿರಿಯ ವಯಸ್ಕರಿಗೆ ಉಸಿರಾಟದ ಅಸ್ವಸ್ಥತೆ |
| **ಕಳಪೆ (201–300)** | ದೀರ್ಘಕಾಲಿಕ ಒಡ್ಡುವಿಕೆಯಿಂದ ಜನರಿಗೆ ಉಸಿರಾಟದ ಅಸ್ವಸ್ಥತೆ |
| **ಅತಿ ಕಳಪೆ (301–400)** | ದೀರ್ಘಕಾಲಿಕ ಒಡ್ಡುವಿಕೆಯಿಂದ ಜನರಿಗೆ ಶ್ವಾಸಕೋಶದ ಅಸ್ವಸ್ಥತೆ |
| **ತೀವ್ರ (>401)** | ಆರೋಗ್ಯವಂತ ಜನರಿಗೂ ಉಸಿರಾಟದ ಅಸ್ವಸ್ಥತೆ |

**AQI of the CAAQM stations established in Bengaluru City**

**Date : 5.8.2021 (Average of past 24 hours)**

| Sl. No. | Station | AQI | Category | Prominent Pollutant |
|---|---|---|---|---|
| 1 | Veterinary College Hebbal | 34 | Good | $PM_{10}$ |
| 2 | Jayanagar 5th Block, Shalini ground | 36 | Good | $NO_2$ |
| 3 | KAVIKA, Mysore Road | 78 | Satisfactory | $PM_{2.5}$ |
| 4 | Rajeev Gandhi Institute of Chest Disease, NIMHANS, Hombegowda Nagar | 48 | Good | $PM_{10}$ |
| 5 | HSR Layout, near Central Silkboard | 99 | Satisfactory | $PM_{10}$ |
| 6 | City Railway Station, Magestic, Bengaluru | 54 | Satisfactory | $PM_{10}$ |
| 7 | Saneguruvanahalli, NisargaBhavan, KSPCB, Shivanagara | 49 | Good | $PM_{10}$ |
| **(5.8.2021 at 11.05 AM)** | | | | |
| 8 | BWSSB, Kadabesanahalli | 117 | Moderate | CO |
| 9 | Peenya | * | * | * |
| 10 | BTM Layout | 53 | Satisfactory | CO |

* Data not available

| Category (Range) | Possible Health Impacts | Category (Range) | Possible Health Impacts |
|---|---|---|---|
| Good (0–50) | Minimal Impact | Poor (201–300) | Breathing discomfort to people on prolonged exposure |
| Satisfactory (51–100) | Minor breathing discomfort to sensitive people | Very Poor (301–400) | Respiratory illness to the people on prolonged exposure |
| Moderate (101–200) | Breathing discomfort to the people with lung, Heart disease, children and older | Severe (>401) | Respiratory effects even on healthy people |